# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಸೋಮವಾರ, ೨೭, ಏಪ್ರಿಲ್, ೨೦೨೬ (ವೈಶಾಖ, ೦೭, ಶಕವರ್ಷ, ೧೯೪೮)<br>BENGALURU, MONDAY, 27, APRIL, 2026 ( VAISHAKHA , 07, SHAKAVARSHA, 1948) | ನಂ. ೩೩೫<br>No. 335 |
|---|---|---|


## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗೋಕಾಕ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ-II) ಗೆ ಸರ್ಕಾರದ ತಾತ್ಕಾಲಿಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ವನಇ 428 ಟಿಟಿಪಿ 92, ದಿನಾಂಕ:04.02.1993.
2. ಸದಸ್ಯ ಕಾರ್ಯದರ್ಶಿಗಳು, ನಗರ ಯೋಜನಾ ಪ್ರಾಧಿಕಾರ, ಗೋಕಾಕ, ಇವರ ಪತ್ರ ಸಂಖ್ಯೆ: ನಯೋಪ್ರಾಗೋ/ ಮಹಾಯೋಜನೆ (ಪ-2)/ 383/ 2025-26, ದಿನಾಂಕ:07.01.2026.
3. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯರವರ ಕಡತ ಸಂಖ್ಯೆ: DTCP-9-MPP-2018-19, ದಿನಾಂಕ: 07.03.2026.

******

**ಪ್ರಸ್ತಾವನೆ**:

ಮೇಲೆ ಓದಲಾದ ಉಲ್ಲೇಖ (1)ರ ಸರ್ಕಾರದ ಆದೇಶದಲ್ಲಿ ಗೋಕಾಕ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4(ಎ) ರನ್ವಯ ಸ್ಥಳೀಯ ಯೋಜನಾ ಪ್ರದೇಶ ಘೋಷಣೆಯಾಗಿರುತ್ತದೆ.

ಮೇಲೆ ಓದಲಾದ ಉಲ್ಲೇಖ (2) ರ ಪತ್ರದಲ್ಲಿ ಗೋಕಾಕ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಲಾಗಿರುವ ಮಹಾಯೋಜನೆ (ಪ-II) ನಕ್ಷೆ ಮತ್ತು ವರದಿಯನ್ನು ಪ್ರಾಧಿಕಾರವು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(1) ರನ್ವಯ ಸರ್ಕಾರದ ತಾತ್ಕಾಲಿಕ ಅನುಮೋದನೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ ರವರ ಏಕ ಕಡತದಲ್ಲಿ ಗೋಕಾಕ ಪಟ್ಟಣದ ಜನಸಂಖ್ಯೆಯು 2011 ರಲ್ಲಿ 79,121 ಇದ್ದು 2041 ನೇ ಇಸವಿಗೆ ಸುಮಾರು 1,30,500 ಆಗಬಹುದೆಂದು ಅಂದಾಜಿಸಿ ಮಹಾಯೋಜನೆಯನ್ನು ಸಿದ್ಧಪಡಿಸಲಾಗಿದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಗೋಕಾಕ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 5676.74 ಹೆಕ್ಟೇರ್ ವಿಸ್ತೀರ್ಣದಲ್ಲಿ 1845.04 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಗೋಕಾಕ ಪಟ್ಟಣದ ಜನಸಂಖ್ಯೆ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಯ ಗತಿ, ರಸ್ತೆಗಳ ಹಾಲಿ ಪರಿಚಲನೆ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವಗಳಿಗನುಗುಣವಾಗಿ ಮಹಾಯೋಜನೆ ಸಿದ್ಧಪಡಿಸಿದ್ದು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 9 ರಿಂದ 12 ರವರೆಗೆ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ 1845.04 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 1029.77 ಹೆಕ್ಟೇರ್ (ಶೇ.55.81), ವಾಣಿಜ್ಯಕ್ಕಾಗಿ 119.77 ಹೆಕ್ಟೇರ್ (ಶೇ.06.49), ಕೈಗಾರಿಕೆಗಾಗಿ 103.76 ಹೆಕ್ಟೇರ್ (ಶೇ.05.62), ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ 107.70 ಹೆಕ್ಟೇರ್ (ಶೇ.05.84), ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 189.62 ಹೆಕ್ಟೇರ್ (ಶೇ.10.28), ಸಾರ್ವಜನಿಕ ಉಪಯುಕ್ತತೆಗಾಗಿ 03.44 ಹೆಕ್ಟೇರ್ (ಶೇ.0.19) ಹಾಗೂ ಸಾರಿಗೆ/ಸಂಪರ್ಕ ವಲಯಕ್ಕೆ 290.98 ಹೆಕ್ಟೇರ್ (ಶೇ.15.77) ಮೀಸಲಿಟ್ಟು ಭೂ ಉಪಯೋಗವನ್ನು ನಿಗಧಿಪಡಿಸಲಾಗಿದೆ.

ಗೋಕಾಕ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆ (ಪ-II)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರನ್ವಯ ತಾತ್ಕಾಲಿಕ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ನಿಯಮಾನುಸಾರ ಸರ್ಕಾರದಲ್ಲಿ ಪುರಿಶೀಲಿಸಲಾಗಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ನಅಇ 100 ಬೆಮಪ್ರಾ 2026(ಇ-ಕಡತ)**
**ಬೆಂಗಳೂರು, ದಿನಾಂಕ:27.04.2026**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಗೋಕಾಕ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆ (ಪ-II) ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ 13(1) ರನ್ವಯ ಸರ್ಕಾರದ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ. ಮಹಾಯೋಜನೆ (ಪ-II) ಗೆ ತಾತ್ಕಾಲಿಕ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಲತಾ.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ),
ನಗರಾಭಿವೃದ್ಧಿ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH